## ಹಿಂಬರಹ

ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2017 /2061 ದಿನಾಂಕ: 23-10-2017

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಸಿಆಸುಇ 02 ಎಸ್‌ಎಂಆರ್ 2015 ಬೆಂಗಳೂರು ದಿನಾಂಕ:27.09.2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್, ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ(8)ಬಿ ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

12374

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರಲ್ಲಿ ನಿಗದಿಪಡಿಸಿರುವ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯ ಆದಾಯದ ಮಿತಿಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** (1) ಅಧಿಸೂಚನೆ ಸಂಖ್ಯೆ: ಸಿಆಸುಇ 26 ಎಸ್ಎಂಆರ್ 2011, ದಿನಾಂಕ:27.03.2012.
(2) ಅಧಿಸೂಚನೆ ಸಂಖ್ಯೆ: ಸಿಆಸುಇ 2 ಎಸ್ಎಂಆರ್ 2015, ದಿನಾಂಕ:29.08.2017.
(3) ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 81 ಪಿಇಎನ್ 2012, ದಿನಾಂಕ: 03.05.2012.

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ **ನಿಯಮ** 2(1) (ii) ರಲ್ಲಿ ನಿಗಧಿಪಡಿಸಿರುವ ಷರತ್ತುಗಳನ್ನು ಪೂರೈಸುವ ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರ ವೈದ್ಯಕೀಯ ವೆಚ್ಚ ಮರುಪಾವತಿಗೆ ಅವಕಾಶವನ್ನು ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಅಧಿಸೂಚನೆಯಲ್ಲಿ, ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರ ವೈದ್ಯಕೀಯ ವೆಚ್ಚ ಮರುಪಾವತಿಗೆ ಸಂಬಂಧಿಸಿದಂತೆ **ನಿಯಮ** 2(1) (ii)ರಲ್ಲಿ ನಿಗದಿಪಡಿಸಿರುವ ಮಾಸಿಕ ಆದಾಯದ ಮಿತಿಯನ್ನು ರೂ.4000/-ಗಳಿಂದ ರೂ.6000/-ಗಳಿಗೆ ಪರಿಷ್ಕರಿಸಿ ಆದೇಶಿಸಲಾಗಿದೆ.

ನಂತರದಲ್ಲಿ, ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರ ವೈದ್ಯಕೀಯ ವೆಚ್ಚ ಮರುಪಾವತಿ ಸಂಬಂಧದಲ್ಲಿ ಕೇಂದ್ರ ಸರ್ಕಾರದ CGHS ಮಾನದಂಡದನುಸಾರ ಆದಾಯದ ಪರಿಮಿತಿಯನ್ನು ಅಳವಡಿಸಿಕೊಳ್ಳಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಅಧಿಸೂಚನೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ **ನಿಯಮ** 2(1) (ii)ರಲ್ಲಿರುವ "ಆರು ಸಾವಿರ ರೂಪಾಯಿಗಳು" ಎಂಬ ಪದಗಳ ಬದಲಿಗೆ "ರಾಜ್ಯ ಸರ್ಕಾರವು ನಿಗಧಿಪಡಿಸಿದ ಕನಿಷ್ಟ ಮೂಲ ಪಿಂಚಣಿ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಯನ್ನು ಪರಿಗಣಿಸುವ ದಿನಾಂಕದಂದು ಕನಿಷ್ಟ ಮೂಲ ಪಿಂಚಣಿಗೆ ಲಭ್ಯವಾಗುವ ತುಟ್ಟಿಭತ್ಯೆಯನ್ನು ಒಳಗೊಂಡ ಮೊತ್ತ" ಎಂಬ ಪದಗಳನ್ನು ಪ್ರತಿಸ್ಥಾಪಿಸಿ ತಿದ್ದುಪಡಿ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ರ ಆದೇಶದಲ್ಲಿ, ರಾಜ್ಯದ ನಿವೃತ್ತ ಸರ್ಕಾರಿ ನೌಕರರುಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ಮತ್ತು ಕರ್ನಾಟಕ ನಾಗರೀಕ ಸೇವಾ(ಅಸಾಧಾರಣ ನಿವೃತ್ತಿ ವೇತನ) ನಿಯಮಾವಳಿಗಳು 2003 ರನ್ವಯ ಲಭ್ಯವಾಗುವ ವಿವಿಧ ಬಗೆಯ ನಿವೃತ್ತಿ ವೇತನಗಳಿಗೆ ಮಾಹೆಯಾನ ರೂ.4800/-ಗಳ ಕನಿಷ್ಠ ಮೊತ್ತವನ್ನು ದಿನಾಂಕ:01.04.2012ರಿಂದ ಜಾರಿಗೆ ಬರುವಂತೆ ಆರ್ಥಿಕ ಇಲಾಖೆಯು ನಿಗಧಿಪಡಿಸಿರುತ್ತದೆ.

. . . . 2

PS-1357 19/10/17 BST (S) AP Rep(Ad) 19/10

ಈ ಹಿನ್ನೆಲೆಯಲ್ಲಿ ಮತ್ತು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) (ತಿದ್ದುಪಡಿ) ನಿಯಮಗಳು, 2017ರನ್ವಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯ ವೈದ್ಯಕೀಯ ವೆಚ್ಚ ಮರುಪಾವತಿ ಪ್ರಕರಣಗಳ ಪರಿಶೀಲನೆ ಸಂದರ್ಭದಲ್ಲಿ ಆದಾಯದ ಮಿತಿಯ ಪರಿಗಣನೆಯನ್ನು ಸ್ಪಷ್ಟೀಕರಿಸುವ ಅಗತ್ಯತೆಯನ್ನು ಮನಗಂಡು ಈ ಕೆಳಕಂಡಂತೆ ಆದೇಶಿಸಿದೆ.

***ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಎಸ್‌ಎಂಆರ್ 2015,***
***ಬೆಂಗಳೂರು, ದಿನಾಂಕ: 27.09.2017***

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) (ತಿದ್ದುಪಡಿ) ನಿಯಮಗಳು, 2017ರನ್ವಯ ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರ ವೈದ್ಯಕೀಯ ವೆಚ್ಚ ಮರುಪಾವತಿಯ ಪ್ರಕರಣಗಳನ್ನು ಪರಿಶೀಲಿಸುವ ಸಂದರ್ಭದಲ್ಲಿ ಅವರ ಮಾಸಿಕ ಆದಾಯ ಮಿತಿಯನ್ನು, ರಾಜ್ಯ ಸರ್ಕಾರವು ನಿಗಧಿಪಡಿಸಿರುವ ಕನಿಷ್ಟ ಮೂಲ ಪಿಂಚಣಿ ರೂ.4800/- (ನಾಲ್ಕು ಸಾವಿರದ ಎಂಟು ನೂರು ರೂಪಾಯಿ)ಗಳು ಹಾಗೂ ಅದಕ್ಕೆ ಆರ್ಥಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಲಭ್ಯವಾಗುವ ತುಟ್ಟಿಭತ್ಯೆಯ ದರಗಳನ್ನು ಸೇರಿಸಿ ಒಳಗೊಂಡ ಮೊತ್ತವನ್ನು ಮಾಸಿಕ ಆದಾಯವೆಂದು ಪರಿಗಣಿಸಿ ಲೆಕ್ಕಹಾಕುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/9/17
(ಎ.ವಿ.ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು- ಇವರಿಗೆ ರಾಜ್ಯಪತ್ರದ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನ ಸೌಧ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು.
9. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯ ಪುರಿ, ನವದೆಹಲಿ-110011.
10. ಎಲ್ಲಾ ಇಲಾಖಾ ಮುಖ್ಯಸ್ಥರು.
11. ಎಲ್ಲಾ ಪ್ರಾದೇಶಿಕ ಆಯುಕ್ತರು.
12. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
13. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
14. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
15. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
16. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
17. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
18. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
20. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
21. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
22. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
24. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು/ವಾರದ ಗೆಜೆಟ್.